ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ಸರ್ಕಾರದ ಜಾಗ/ಸ್ಥಳಗಳಲ್ಲಿ ಕಳೆದ 30-40 ವರ್ಷಗಳಿಂದ ವಾಸವಾಗಿರುವ ಕುಟುಂಬಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

08 (23) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ಸರ್ಕಾರದ ಜಾಗ/ಸ್ಥಳಗಳಲ್ಲಿ ಕಳೆದ 30-40 ವರ್ಷಗಳಿಂದ ವಾಸವಾಗಿರುವ ಕುಟುಂಬಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸದರಿ ಸರ್ಕಾರಿ ಜಾಗದಲ್ಲಿ ವಾಸ ಮಾಡುತ್ತಿರುವ ಈ ಕುಟುಂಬಗಳಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಸರ್ಕಾರದಿಂದ ನೀಡಲಾಗಿದೆಯೇ; (ತಾಲ್ಲೂಕುವಾರು, ಕುಟುಂಬವಾರು, ಫಲಾನುಭವಿಗಳವಾರು ಮಾಹಿತಿ ನೀಡುವುದು)

(ಇ) ಸದರಿ ಕುಟುಂಬಗಳಿಗೆ ಮೂಲಭೂತ ಸೌಕರ್ಯವನ್ನು ಪಂಚಾಯಿತಿಯಿಂದ ಒದಗಿಸಿ ಹಕ್ಕುಪತ್ರ ನೀಡದೆ ಇರುವ ಪ್ರಕರಣಗಳ ಸಂಖ್ಯೆ ಎಷ್ಟು; ಇವರಿಗೆ ಹಕ್ಕು ಪತ್ರಗಳನ್ನು ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಹಕ್ಕು ಪತ್ರ ವಿತರಣೆ ಇರುವುದರಿಂದ ಸರ್ಕಾರಕ್ಕೆ ಪಾವತಿಸುವ ತೆರಿಗೆಯ ಮೊತ್ತ ಸರ್ಕಾರದ ಖಜಾನೆಗೆ ಜಮಾ ಆಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಆಗಿದ್ದಲ್ಲಿ ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?